# ಕರ್ನಾಟಕ ಸರ್ಕಾರ

## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.

**ಸಿ.ಸಿ.ನಂ.2424/2022**

ಪಿ.ಡಬ್ಲ್ಯೂ: 2

ಸಿ.ಡಬ್ಲ್ಯೂ: 2

ಸಾಕ್ಷಿದಾರರ ಹೆಸರು : ಕಾರ್ತಿಕ್

ತಂದೆಯ ಹೆಸರು: :ರಾಜು

ವಯಸ್ಸು : **26 ವರ್ಷ**

ಉದ್ಯೋಗ : ಎಲೆಕ್ಟ್ರಿಷನ್ ಕೆಲಸ

ವಾಸಸ್ಥಳ : ರಂಗೇನಳ್ಳಿ ಗ್ರಾಮ

**ದಿನಾಂಕ: 11-08-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ಎರಡು ವರ್ಷಗಳ ಹಿಂದೆ ನಾನು ರಂಗೇನಹಳ್ಳಿಯ ಹೈಸ್ಕೂಲ್ ಹತ್ತಿರ ಮಧ್ಯಾಹ್ನ 12-30 ರಿಂದ 1-30 ಗಂಟೆ ಸಮಯದಲ್ಲಿ ದನದ ಮಾಂಸದ ವಿಚಾರವಾಗಿ ಪೊಲೀಸರು ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ಸಹಿ ಮಾಡಿರುತ್ತೇನೆ. ಮಹಜರ್ ನಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿರುತ್ತದೆ. ನನ್ನ ಸಮಕ್ಷಮದಲ್ಲಿ ಪೊಲೀಸರು ಅಂದಾಜು 30 ಕೆಜಿ ದನದ ಮಾಂಸವನ್ನು ಮತ್ತು ಆಟೋವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-3 ಮತ್ತು 4 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿ: **05-04-2022** ರಂದು ಮ. **12-30** ರಿಂದ **1-30** ಗಂಟೆ ಸಮಯದಲ್ಲಿ ರಂಗೇನಹಳ್ಳಿ ಗ್ರಾಮದ ಬರಗೇನಹಳ್ಳಿಗೆ ಹೋಗುವ ಕಾಂಕ್ರಿಟ್ ರಸ್ತೆಯಲ್ಲಿ ಶೇಖರಪ್ಪನವರ ಮನೆಯ ಮುಂಭಾಗದಲ್ಲಿ ದನದ ಮಾಂಸವನ್ನು ಕೆಎ **14** ಸಿ **2674** ಪ್ಯಾಸೆಂಜರ್ ಆಟೋದಲ್ಲಿ ಸುಮಾರು **16** ಕೆಜಿ ಯಷ್ಟು

ದನದ ಮಾಂಸವನ್ನು ಮಾರಾಟ ಮಾಡಲು ತೆಗೆದುಕೊಂಡು ಹೋಗುತ್ತಿದ್ದು, ಸದರಿ ಸಮಯದಲ್ಲಿ ಪೊಲೀಸರು ಮಹಜರ್ ಮಾಡಿದ್ದು ಸದರಿ ಮಹಜರ್ ಗೆ ನೀವು ಸಹಿ ಮಾಡಿರುತ್ತಿರಾ ಎಂದರೆ ಸರಿ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ.</u>**

ಪೋಲಿಸರು ಮಹಜರ್ ಮಾಡುವ ಸಮಯದಲ್ಲಿ ನಾನು ಕ್ರಿಕೆಟ್ ಆಡುತ್ತಿದ್ದು, ಪೊಲೀಸರು ನನ್ನನ್ನು ಕರೆದುಕೊಂಡು ಹೋಗಿರುತ್ತಾರೆ. ದಾಳಿ ಮಾಡಿದ ಸ್ಥಳ ಜನಸಂದಣಿ ಪ್ರದೇಶ ಆಗಿರುತ್ತದೆ ಎಂದರೆ ಸರಿ. ಪೊಲೀಸರು ಎಷ್ಟು ಕೆಜಿ ಮಾಂಸವನ್ನು ಅಮಾನತ್ತುಪಡಿಸಿಕೊಂಡರು ಎಂದು ನನಗೆ ಗೊತ್ತಿರುವುದಿಲ್ಲ. ಪೊಲೀಸರು ಮಾಂಸದ ಜೊತೆ ಬೇರೆ ಉಪಕರಣವನ್ನು ಅಮಾನತ್ತುಪಡಿಸಿಕೊಂಡರಾ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ಆಟೋ ನಂಬರ್ ನನಗೆ ನೆನಪಿಲ್ಲ. ದಾಳಿ ಮಾಡಿದ ಸ್ಥಳದ ಚಕ್ಕುಬಂದಿ ನನಗೆ ಈಗ ಹೇಳಲು ಬರುವುದಿಲ್ಲ. ಪೊಲೀಸರು ನನಗೆ ಯಾವುದೇ ನೋಟೀಸನ್ನು ನೀಡಿರುವುದಿಲ್ಲ. ದಾಳಿ ಮಾಡುವ ಸಮಯದಲ್ಲಿ ಮಂಜುನಾಥ್ ಮತ್ತು ಮೂರ್ತಪ್ಪ ಎಂಬುವ ಪೊಲೀಸ್ ಇದ್ದರು. ನನ್ನ ಜೊತೆ ಮಣಿ ಎಂಬುವವರು ಸಹ ಮಹಜರ್ ಗೆ ಸಹಿ ಮಾಡಿರುತ್ತಾರೆ. ಸ್ಥಳದಲ್ಲಿ ಬೇರೆ ಯಾರು ಜನರು ಇದ್ದರು ಎಂದು ನನಗೆ ಹೇಳಲು ಬರುವುದಿಲ್ಲ. ಮಹಜರ್ ನಲ್ಲಿ ಬರೆದಿವರುವ ವಿಚಾರವನ್ನು ನಾನು ತಿಳಿದುಕೊಂಡಿರುವುದಿಲ್ಲ. ಪೊಲೀಸರು ಮಹಜರ್ ನ್ನು ಓದಿ ತಿಳಿಸಿರುತ್ತಾರಾ ಎಂದರೆ ಸಾಕ್ಷಿ ಅಮಾನತ್ತುಪಡಿಸಿಕೊಂಡಿರುವುದನ್ನು ನನ್ನ ಹತ್ತಿರ ಹೇಳಿರುತ್ತಾರೆಂದು ನುಡಿದಿರುತ್ತಾರೆ. ಮಹಜರ್ ನ್ನು ಪೊಲೀಸರು ಬರೆದಿರುತ್ತಾರೆ, ಅವರ ಹೆಸರು ನನಗೆ ತಿಳಿದಿರುವುದಿಲ್ಲ. ಪೊಲೀಸರಿಗೆ ಸಹಾಯ ಮಾಡಲು ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರೂ ಸಹ ನೀವು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದಿರಾ ಎಂದರೆ ಸರಿಯಲ್ಲ.

**<u>ಮರುವಿಚಾರಣೆ</u>:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**